ದಿನಾಂಕ: 08.03.2021 ರಂದು ಮಧ್ಯಾಹ್ನ 3.00 ಗಂಟೆಗೆ ಶಿವನಗರ ವಾರ್ಡ್ ನಂ. 107 ರಲ್ಲಿ ನೋಡಲ್ ಅಧಿಕಾರಿಯವರಾದ **ಶ್ರೀ ಲಿಂಗಣ್ಣ ಗುಂಡಳ್ಳಿ,** ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು:-**

1. ಶ್ರೀ ಸೋಮಶೇಖರ್.ಜಿ.ಎಲ್ ಸಹಾಯಕ ಅಭಿಯಂತರರು, ವಾರ್ಡ್ ನಂ. 107 ಶಿವನಗರ
2. ಶ್ರೀ ನಾಗರಾಜ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
3. ಶ್ರೀಮತಿ ರೇಷ್ಮ, ಸಹಾಯಕ ಅಭಿಯಂತರರು, ಎಸ್.ಡಬ್ಲ್ಯೂ.ಎಂ.
4. ಶ್ರೀ ಹರೀಶ್‌ನಾಯಕ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5. ಶ್ರೀ ಪರಶುರಾಮ್ ಕಿರಿಯ ಅಭಿಯಂತರರು , ಬೆಸ್ಕಾಂ
6. ಶ್ರೀ ಶಿವಕುಮಾರ್, ಹಿರಿಯ ಆರೋಗ್ಯ ಪರಿವೀಕ್ಷಕರು
7. ಶ್ರೀ ಲೋಕೇಶ್, ಕಂದಾಯ ಪರಿವೀಕ್ಷಕರು,
8. ಶ್ರೀ ರವಿ, ಕಂದಾಯ ವಸೂಲಿಗಾರರು
9. ಶ್ರೀ ಶ್ರೀನಾಥ್, ಅರಣ್ಯ ಇಲಾಖೆ
10. ಶ್ರೀ ನಾಗರಾಜ್, ತೋಟಗಾರಿಕೆ ಇಲಾಖೆ
11. ಶ್ರೀ ನರಸಿಂಹ, ಕೆಲಸ ಪರಿವೀಕ್ಷಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
12. ಶ್ರೀ ರಮೇಶ್, ಪಶು ಪಾಲನಾ ಇಲಾಖೆ.
13. ಶ್ರೀ ಶರಣಬಸವ, ಮಾರ್ಷಲ್

ಶ್ರೀ ಸೋಮಶೇಖರ್.ಜಿ.ಎಲ್. ಕಾರ್ಯದರ್ಶಿಗಳು ಹಾಗೂ ಸಂಚಾಲಕರು, ವಾರ್ಡ್ ನಂ. 107ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಈ ಕೆಳಗಿನ ಅಂಶಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

1. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ತಿಮ್ಮಯ್ಯ ರಸ್ತೆಯಲ್ಲಿರುವ ಸೌತ್ ಹೋಟೆಲ್ ರವರು ಪಕ್ಕದಲ್ಲಿರುವ ಖಾಲಿ ಜಾಗದಲ್ಲಿ ಹೋಟೆಲ್ ಕಸವನ್ನು ಹಾಕುತ್ತಿದ್ದು, ಸದರಿ ರವರಿಗೆ ದಂಡವನ್ನು ವಿಧಿಸಲು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಹಿರಿಯ ಪರಿವೀಕ್ಷಕರು ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.
2. ಶ್ರೀಮತಿ ರೇಷ್ಮ, ಸಹಾಯಕ ಅಭಿಯಂತರರು, ಎಸ್.ಡಬ್ಲ್ಯೂ.ಎಂ. ರವರು ಮಾತನಾಡುತ್ತಾ, ಸಿದ್ದಗಂಗಾ ಕಲ್ಯಾಣ ಮಂಟಪದಿಂದ ತಿಮ್ಮಯ್ಯ ರಸ್ತೆಯವರೆಗೆ ದೊಡ್ಡ ಮಳೆನೀರು ಚರಂಡಿಯ ಕಾಮಗಾರಿಯು ಪ್ರಗತಿಯಲ್ಲಿದ್ದು, ಸದರಿ ಚರಂಡಿಯ ಪಕ್ಕದಲ್ಲಿರುವ ಮನೆಯವರು ಒಳನೀರು ಚರಂಡಿಯ ಸಂಪರ್ಕವನ್ನು ದೊಡ್ಡ ಮಳೆನೀರು ಚರಂಡಿಗೆ ಬಿಟ್ಟಿರುವುದರಿಂದ ಕೆಲಸ ನಿರ್ವಹಿಸಲು ಕಷ್ಟಕರವಾಗಿರುತ್ತದೆ ಮತ್ತು ಒಳಚರಂಡಿಯ ನೀರನ್ನು ಮಳೆನೀರು ಚರಂಡಿಗೆ ಬಿಡಬಾರದೆಂದು ಮಾನ್ಯ ನ್ಯಾಯಾಲಯದ ಆದೇಶವಿರುವುದರಿಂದ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಇಲಾಖೆಯವರು ಪರಿಶೀಲಿಸಿ ಕ್ರಮ ಕೈಗೊಳ್ಳಲು ಸಭೆಯಲ್ಲಿ ಕೋರಿದರು.
3. ಸಭೆಯಲ್ಲಿದ್ದ ಸಾರ್ವಜನಿಕರು ಮಾತನಾಡುತ್ತಾ, 18ನೇ ಬಿ ಮುಖ್ಯ ರಸ್ತೆ, 5ನೇ ಬ್ಲಾಕ್, ರಾಜಾಜಿನಗರ ಇಲ್ಲಿ ಒಳಚರಂಡಿಯ ಪೈಪ್ ಬ್ಲಾಕ್ ಆಗಿ, ಆಗಿಂದಾಗೆ ಒಳಚರಂಡಿಯ ನೀರು ರಸ್ತೆಯಲ್ಲಿ ಹರಿಯುತ್ತಿರುವುದರಿಂದ ಅಲ್ಲಿನ ನಿವಾಸಿಗಳಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರು ಪರಿಶೀಲಿಸಿ, ದುರಸ್ಥಿಪಡಿಸಲು ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.
4. ಶ್ರೀ ವೆಂಕಟೇಶ್ ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, 13ನೇ ಮುಖ್ಯ ರಸ್ತೆ, 3ನೇ ವೈ ಬ್ಲಾಕ್, ಇಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಒಳಚರಂಡಿ ಕೊಳವೆ ಮಾರ್ಗವನ್ನು ಬದಲಾಯಿಸುವ ಕಾಮಗಾರಿಯನ್ನು ಕೈಗೊಂಡು ಪೂರ್ಣಗೊಳಿಸಲಾಗಿರುತ್ತದೆ. ಆದರೆ ರಸ್ತೆಗೆ ಡಾಂಬರೀಕರಣ ಮಾಡದೆ ಇರುವುದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯಗುತ್ತಿರುವುದಾಗಿ ಸಭೆಗೆ ತಿಳಿಸಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ವಾರ್ಡ್ ಅಭಿಯಂತರರಿಗೆ ಸದರಿ ರಸ್ತೆಯನ್ನು ದುರಸ್ಥಿಪಡಿಸಲು ಕ್ರಮ ಕೈಗೊಳ್ಳುವಂತೆ ತಿಳಿಸಿದರು.

**ಪು.ತಿ.ನೋ.**

Scanned by CamScanner

5. ಶ್ರೀ ಕೇಶವಮೂರ್ತಿ ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ಬೆಸ್ಕಾಂ ವತಿಯಿಂದ ಗಂಗಮ್ಮ ತಿಮ್ಮಯ್ಯ ಶಾಲೆಯ ರಸ್ತೆಯಲ್ಲಿ ಕೇಬಲ್ ಅಳವಡಿಸಲು ರಸ್ತೆಯನ್ನು ಕತ್ತರಿಸಿ, ಕಾಮಗಾರಿಯನ್ನು ಪೂರ್ಣಗೊಳಿಸಿರುತ್ತಾರೆ. ಆದರೆ ಕಾಮಗಾರಿಯ ನಂತರ ಉಳಿದಿರುವ ಮಣ್ಣನ್ನು ತೆರವುಗೊಳಿಸಿರುವುದಿಲ್ಲವೆಂದು ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಕಿರಿಯ ಅಭಿಯಂತರರು ಬಾಕಿ ಉಳಿದಿರುವ ಮಣ್ಣನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.
6. ಮೋಟಪ್ಪ ಪಾರ್ಕ್‌ನಲ್ಲಿ ಸೊಳ್ಳೆಗಳು ಜಾಸ್ತಿ ಇರುವುದರಿಂದ ಉದ್ಯಾನವಕ್ಕೆ ಬರುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ವಾರ್ಡ್ ಕಮಿಟಿ ಸದಸ್ಯರು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಹಿರಿಯ ಆರೋಗ್ಯ ಪರಿವೀಕ್ಷಕರು ಸೊಳ್ಳೆ ಔಷಧಿ ಸಿಂಪಡಿಸಲು ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ತಿಳಿಸುವ ದೂರುಗಳನ್ನು ಸರಿಪಡಿಸಿ, ಮುಂದಿನ ಸಭೆಯಲ್ಲಿ ವರದಿಯನ್ನು ನೀಡುವಂತೆ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 107

ಸಹಿ/-
ಶ್ರೀ ಲಿಂಗಣ್ಣ ಗುಂಡಳ್ಳಿ
ನೋಡಲ್ ಅಧಿಕಾರಿಗಳು

ವಾರ್ಡ್ ನಂ. 107

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು , ರಾಜಾಜಿನಗರ ವಿಭಾಗ/ಯೋಜನೆ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಘನತ್ಯಾಜ್ಯ] ರಾಜಾಜಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬಿ.ಡಬ್ಲ್ಯು.ಎಸ್.ಎಸ್.ಬಿ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬೀದಿ ದೀಪಗಳ ನಿರ್ವಹಣೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬೆಸ್ಕಾಂ] ಉಪವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ರಸ್ತೆ ಮತ್ತು ಮೂಲ ಭೂತ ಸೌಕರ್ಯ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
10. ಕಲ್ಯಾಣ ಅಧಿಕಾರಿ, ಪಶ್ಚಿಮ ವಲಯ, ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
11. ಸಂಚಾರಿ ಪೋಲಿಸ್ ಠಾಣೆ, ರಾಜಾಜಿನಗರ/ವಿಜಯನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
12. ಪೋಲಿಸ್ ಠಾಣೆ, ರಾಜಾಜಿನಗರ/ಬಸವೇಶ್ವರನಗರ, ರವರ ಮಾಹಿತಿಗಾಗಿ ಸಲ್ಲಿಸಿದೆ.
13. ಅರಣ್ಯಾಧಿಕಾರಿ, ಬಿ.ಬಿ.ಎಂ.ಪಿ. ಪಶ್ಚಿಮ ರವರ ಮಾಹಿತಿಗಾಗಿ ಸಲ್ಲಿಸಿದೆ.

Scanned by CamScanner